**Akashvani : Bangalore**
**National Bulletin In Kannada**
**17.05.2024 / 19.35 hrs**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**17.05.2024 / 19.35 hrs**

**<><*<><>*><>**

ಮುಖ್ಯಾಂಶಗಳು

**೧. ಐದನೇ ಹಂತದ ಚುನಾವಣೆ ನಡೆಯುವ ಲೋಕಸಭಾ ಕ್ಷೇತ್ರಗಳಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಪ್ರಚಾರ; ಮುಂಬೈನಲ್ಲಿ ಐಎನ್‌ಡಿಐ ಮೈತ್ರಿಕೂಟದಿಂದ ಬೃಹತ್ ರ್‍ಯಾಲಿ**

**೨. ಉತ್ತರ ಭಾರತದಲ್ಲಿ ತಾಪಮಾನ ಹೆಚ್ಚಳ; ದಕ್ಷಿಣ ಭಾರತದಲ್ಲಿ ಧಾರಾಕಾರ ಮಳೆ**

**೩. ಥಾಯ್ಲೆಂಡ್ ಓಪನ್ ಬ್ಯಾಡ್ಮಿಂಟನ್; ಸೆಮಿಫೈನಲ್ ಪ್ರವೇಶಿಸಿದ ಭಾರತದ ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ - ಚಿರಾಗ್ ಶೆಟ್ಟಿ ಜೋಡಿ**

**೪. ಐಪಿಎಲ್ ಕ್ರಿಕೆಟ್; ಮುಂಬೈ ಇಂಡಿಯನ್ಸ್ -ಲಖನೌ ಸೂಪರ್ ಜೈಂಟ್ಸ್ ತಂಡಗಳು ಮುಖಾಮುಖಿ**

**<><*<><>*><>**

೭ನೇ ಹಾಗೂ ಕೊನೆಯ ಹಂತದ ಲೋಕಸಭಾ ಚುನಾವಣೆಗೆ ಸಲ್ಲಿಸಿರುವ ನಾಮಪತ್ರಗಳನ್ನು ಹಿಂಪಡೆಯಲು ಅಭ್ಯರ್ಥಿಗಳಿಗೆ ಇಂದು ಕೊನೆಯ ದಿನವಾಗಿತ್ತು. ಈ ಹಂತದಲ್ಲಿ ಏಳು ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶದ ಒಂದು ಸೇರಿದಂತೆ ಒಟ್ಟು ೫೭ ಲೋಕಸಭಾ ಕ್ಷೇತ್ರಗಳಿಗೆ ಚುನಾವಣೆ ನಡೆಯಲಿದೆ. ಉತ್ತರಪ್ರದೇಶ ಮತ್ತು ಪಂಜಾಬ್‌ನ ತಲಾ ೧೩, ಪಶ್ಚಿಮ ಬಂಗಾಳದ ೯, ಬಿಹಾರದ ೮, ಒಡಿಶಾದ ೬, ಹಿಮಾಚಲ ಪ್ರದೇಶದ ೪, ಜಾರ್ಖಂಡ್‌ನ ೩ ಹಾಗೂ ಕೇಂದ್ರಾಡಳಿತ ಪ್ರದೇಶ ಚಂಡೀಗಢದ ೧ ಕ್ಷೇತ್ರಕ್ಕೆ ಜೂನ್ ೧ ರಂದು ಮತದಾನ ಜರುಗಲಿದೆ. ಎಲ್ಲಾ ಹಂತಗಳ ಮತ ಎಣಿಕೆ ಕಾರ್ಯ ಜೂನ್ ೪ ರಂದು ನಡೆಯಲಿದೆ.

**<><*<><>*><>**

ಸಮಾಜವಾದಿ ಪಕ್ಷವು ಇದೀಗ ಪಶ್ಚಿಮ ಬಂಗಾಳದಲ್ಲಿ ಆಶ್ರಯ ಪಡೆದಿದೆ. ಮತ ಬ್ಯಾಂಕ್ ಮತ್ತು ತುಷ್ಟೀಕರಣಕ್ಕಾಗಿ ಸಮಾಜವಾದಿ ಪಕ್ಷ ಮತ್ತು ತೃಣಮೂಲ ಕಾಂಗ್ರೆಸ್ ಮೈತ್ರಿ ಮಾಡಿಕೊಂಡಿವೆ

ಎಂದು ಬಿಜೆಪಿ ಹಿರಿಯ ನಾಯಕ ಮತ್ತು ಪ್ರಧಾನಿ ನರೇಂದ್ರ ಮೋದಿ ದೂರಿದರು. ಉತ್ತರ ಪ್ರದೇಶದ ಬಾರಾಬಂಕಿಯಲ್ಲಿ ಇಂದು ಚುನಾವಣಾ ರ್‍ಯಾಲಿ ಉದ್ದೇಶಿಸಿ ಮಾತನಾಡಿದ ಅವರು, ಅಧಿಕಾರಕ್ಕಾಗಿ ತೃಣಮೂಲ ಕಾಂಗ್ರೆಸ್ ಮುಖ್ಯಸ್ಥೆ ಮಮತಾ ಬ್ಯಾನರ್ಜಿ ಅವರೊಂದಿಗೆ ಸಮಾಜವಾದಿ ಪಕ್ಷದ ಮುಖ್ಯಸ್ಥ ಅಖಿಲೇಶ್ ಯಾದವ್ ಮೈತ್ರಿ ಮಾಡಿಕೊಂಡಿದ್ದಾರೆ ಎಂದು ಆರೋಪಿಸಿದರು. ಬಿಜೆಪಿ ಮತ್ತು ಎನ್‌ಡಿಎ ಮೈತ್ರಿಕೂಟವು ದೇಶದ ಹಿತಕ್ಕಾಗಿ ಸಮರ್ಪಿತವಾಗಿದೆ. ತಮ್ಮ ಮೂರನೇ ಅವಧಿಯಲ್ಲಿ ಮಹಿಳೆಯರು, ರೈತರು, ಕಾರ್ಮಿಕರು, ಬಡವರ ಕಲ್ಯಾಣಕ್ಕಾಗಿ ಹಲವಾರು ಪ್ರಮುಖ ನಿರ್ಧಾರಗಳನ್ನು ಕೈಗೊಳ್ಳಲಿದ್ದೇವೆ ಎಂದು ನರೇಂದ್ರ ಮೋದಿ ಹೇಳಿದರು. ಇದೇ ವೇಳೆ ಫತೆಹ್‌ಪುರ್‌ದಲ್ಲಿ ನಡೆದ ಚುನಾವಣಾ ರ್‍ಯಾಲಿಯನ್ನು ಉದ್ದೇಶಿಸಿ ಮಾತನಾಡಿದ ಪ್ರಧಾನಮಂತ್ರಿ, ಈ ಹಿಂದೆ ಉತ್ತರ ಪ್ರದೇಶವು ಅಪರಾಧ ಪ್ರಕರಣಗಳು ಮತ್ತು ಭ್ರಷ್ಟಾಚಾರದಿಂದ ಕುಖ್ಯಾತಿ ಪಡೆದಿತ್ತು. ಆದರೆ, ಇದೀಗ ಅಭಿವೃದ್ಧಿ ಕಾರಣಗಳಿಂದಾಗಿ ರಾಜ್ಯ ಖ್ಯಾತಿ ಪಡೆದಿದೆ ಎಂದು ಹೇಳಿದರು. ನಂತರ ನರೇಂದ್ರ ಮೋದಿ ಉತ್ತರ ಪ್ರದೇಶದ ಹಮೀರ್‌ಪುರ್ ಲೋಕಸಭಾ ಕ್ಷೇತ್ರ ಮತ್ತು ಮಹಾರಾಷ್ಟ್ರದ ಮುಂಬೈನಲ್ಲಿ ನಡೆದ ಚುನಾವಣಾ ರ್‍ಯಾಲಿಗಳಲ್ಲಿ ಪಾಲ್ಗೊಂಡು, ಪಕ್ಷದ ಅಭ್ಯರ್ಥಿಗಳ ಪರ ಮತಯಾಚಿಸಿದರು. ಬಿಜೆಪಿ ಮುಖಂಡ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ, ಉತ್ತರ ಪ್ರದೇಶದ ಅಮೇಥಿ, ಒಡಿಶಾದ ಸುಂದರ್‌ಘರ್ ಮತ್ತು ಜಾರ್ಖಂಡ್‌ನ ರಾಂಚಿಯಲ್ಲಿ ನಡೆದ ಸಾರ್ವಜನಿಕ ಸಭೆಗಳಲ್ಲಿ ಪಾಲ್ಗೊಂಡರು. ಕಾಂಗ್ರೆಸ್‌ನ ಹಿರಿಯ ನಾಯಕಿ ಸೋನಿಯಾಗಾಂಧಿ, ನಾಯಕ ರಾಹುಲ್ ಗಾಂಧಿ, ಪಕ್ಷದ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕಾ ಗಾಂಧಿ ವಾದ್ರಾ ಮತ್ತು ಸಮಾಜವಾದಿ ಪಕ್ಷದ ಮುಖ್ಯಸ್ಥ ಅಖಿಲೇಶ್ ಯಾದವ್, ಉತ್ತರ ಪ್ರದೇಶದ ರಾಯ್‌ಬರೇಲಿ ಮತ್ತು ಅಮೇಥಿಯಲ್ಲಿ ಜಂಟಿ ಚುನಾವಣಾ ರ್‍ಯಾಲಿಯಲ್ಲಿ ಭಾಗವಹಿಸಿದ್ದರು. ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್, ಬಲ್‌ರಾಮ್‌ಪುರ್, ಬಾರಾಬಂಕಿ, ಲಖನೌ ಹಾಗೂ ಅಯೋಧ್ಯೆಯಲ್ಲಿ ಪಕ್ಷದ ಅಭ್ಯರ್ಥಿ ಪರವಾಗಿ ಪ್ರಚಾರ ನಡೆಸಿದರು.  ಇದೇ ವೇಳೆ, ಎಐಎಂಐಎಂನ ಮುಖ್ಯಸ್ಥ ಅಸಾದುದ್ದೀನ್ ಒವೈಸಿ, ಕೌಶಾಂಬಿಯಲ್ಲಿ ನಡೆದ ಸಾರ್ವಜನಿಕ ಸಭೆಯಲ್ಲಿ ಭಾಗವಹಿಸಿದ್ದರು.  ಆಮ್ ಆದ್ಮಿ ಪಕ್ಷದ ರಾಷ್ಟ್ರೀಯ ಸಂಚಾಲಕ ಹಾಗೂ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಪಂಜಾಬ್‌ನ ಅಮೃತ್‌ಸರದಲ್ಲಿ ಪಕ್ಷದ ಅಭ್ಯರ್ಥಿ ಪರವಾಗಿ ಮತಯಾಚಿಸಿದರು. ಮತ್ತೊಂದೆಡೆ, ಮುಂಬೈನ ಬಾಂದ್ರಾಕುರ್ಲಾ ಕಾಂಪ್ಲೆಕ್ಸ್ ಮೈದಾನದಲ್ಲಿ ಐಎನ್‌ಡಿಐಎ ಮೈತ್ರಿಕೂಟ ಬೃಹತ್ ರ್‍ಯಾಲಿ ಆಯೋಜಿಸಿತ್ತು. ರ್‍ಯಾಲಿಯಲ್ಲಿ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್, ಎನ್‌ಸಿಪಿ ವರಿಷ್ಠ ಶರದ್ ಪವಾರ್ ಸೇರಿದಂತೆ ಮೈತ್ರಿಕೂಟದ ಹಲವು ನಾಯಕರು ಭಾಗವಹಿಸಿದ್ದರು.

<><*<><>*><>

ಆಮ್ ಆದ್ಮಿ ಪಕ್ಷದ ರಾಜ್ಯಸಭಾ ಸಂಸದೆ ಸ್ವಾತಿ ಮಲಿವಾಲ್ ಅವರೊಂದಿಗೆ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರ ಆಪ್ತ ಕಾರ್ಯದರ್ಶಿ ಬಿಭವ್ ಕುಮಾರ್ ನಡೆಸಿದ್ದಾರೆ ಎನ್ನಲಾದ ಅನುಚಿತ ವರ್ತನೆಯನ್ನು ರಾಷ್ಟ್ರೀಯ ಮಹಿಳಾ ಆಯೋಗದ ಮುಖ್ಯಸ್ಥೆ ರೇಖಾ ಶರ್ಮಾ ಖಂಡಿಸಿದ್ದಾರೆ. ದೆಹಲಿಯಲ್ಲಿಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ರೇಖಾ ಶರ್ಮಾ, ಮಹಿಳಾ ಹಕ್ಕುಗಳಿಗೆ ಹೋರಾಟ ನಡೆಸುವ ಖ್ಯಾತ ನ್ಯಾಯವಾದಿ ಮತ್ತು ದೆಹಲಿ ಮಹಿಳಾ ಆಯೋಗದ ಮಾಜಿ ಮುಖ್ಯಸ್ಥರಿಗೆ ಈ ರೀತಿ ಆದರೆ, ಸಾಮಾನ್ಯ ಮಹಿಳೆಯರ ಗತಿ ಏನು ಎಂದು ಕಾಳಜಿ ವ್ಯಕ್ತಪಡಿಸಿದ್ದಾರೆ. 'ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿಗೆ  ರಾಷ್ಟ್ರೀಯ ಮಹಿಳಾ ಆಯೋಗದಿಂದ ನೋಟಿಸ್ ಜಾರಿಗೊಳಿಸಲಾಗಿದ್ದು, ನಾಳೆ ವಿಚಾರಣೆಗೆ ಹಾಜರಾಗುವಂತೆ ಸೂಚಿಸಲಾಗಿದೆ' ಎಂದು ಅವರು ತಿಳಿಸಿದ್ದಾರೆ. ಇನ್ನೊಂದೆಡೆ, ಬಿಜೆಪಿ ನಾಯಕಿ ಹಾಗೂ ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್, ಸ್ವಾತಿ ಮಲಿವಾಲ್ ಘಟನೆಯ ಬಗ್ಗೆ ದೆಹಲಿಯಲ್ಲಿಂದು ಪ್ರತಿಕ್ರಿಯೆ ನೀಡಿದ್ದು, ದೆಹಲಿಯ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಸಾರ್ವಜನಿಕವಾಗಿ ಕ್ಷಮೆಯಾಚಿಸಬೇಕು ಎಂದು ಆಗ್ರಹಿಸಿದರು. ಅರವಿಂದ್ ಕೇಜ್ರಿವಾಲ್ ಅವರ ನಿವಾಸದಲ್ಲಿ ನಡೆದಿರುವ ಈ ಘಟನೆಗೆ ಸಂಬಂಧಿಸಿದಂತೆ ಈವರೆಗೆ ಯಾವುದೇ ಕ್ರಮವನ್ನು ಕೈಗೊಳ್ಳಲಾಗಿಲ್ಲ. ಮುಖ್ಯಮಂತ್ರಿಗಳ ನಿವಾಸದಲ್ಲೇ ಮಹಿಳೆಗೆ ಸುರಕ್ಷತೆ ಇಲ್ಲ.  ಆಮ್ ಆದ್ಮಿ ಪಕ್ಷವು ಮಹಿಳಾ ವಿರೋಧಿ ಪಕ್ಷವಾಗಿದೆ ಎಂದು ಆರೋಪಿಸಿದ ಅವರು, ಶೀಘ್ರ ತಪ್ಪಿಸ್ಥರನ್ನು ಕಾನೂನಿನಡಿ ಶಿಕ್ಷೆಗೆ ಗುರಿಪಡಿಸಬೇಕು ಎಂದು ನಿರ್ಮಲಾ ಸೀತಾರಾಮನ್ ಒತ್ತಾಯಿಸಿದರು.  ಇದೇ ವೇಳೆ, ಘಟನೆ ಸಂಬಂಧ ಆಮ್ ಆದ್ಮಿ ಪಕ್ಷದ ರಾಜ್ಯಸಭಾ ಸಂಸದೆ ಸ್ವಾತಿ ಮಲಿವಾಲ್ ದೆಹಲಿ ಪೊಲೀಸರಿಗೆ ದೂರು ನೀಡಿದ್ದಾರೆ.

<><*<><>*><>

ರಾಜಸ್ಥಾನ, ಪಂಜಾಬ್, ಹರಿಯಾಣ ಮತ್ತು ದೆಹಲಿಯಲ್ಲಿ ಇದೇ ೨೧ರವರೆಗೆ ತಾಪಮಾನ ಹೆಚ್ಚಳವಾಗಲಿದೆ. ದೇಶದ ಪೂರ್ವ ಮತ್ತು ಉತ್ತರ ಭಾಗಗಳ ಹಲವು ಪ್ರದೇಶಗಳಲ್ಲಿ ನಾಳೆಯಿಂದ ಬಿಸಿಗಾಳಿ ಬೀಸಲಿದೆ. ದಕ್ಷಿಣ ಭಾರತದ ವಿವಿಧೆಡೆ ಧಾರಕಾರ ಮಳೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಕರ್ನಾಟಕ, ತಮಿಳುನಾಡು, ಪುದುಚೆರಿ, ಕರೈಕಲ್, ಕೇರಳ, ಮಾಹೆ, ಆಂಧ್ರಪ್ರದೇಶದ ಕರಾವಳಿ ಮತ್ತು ರಾಯಲ್‌ಸೀಮಾ ಪ್ರದೇಶಗಳಲ್ಲಿ ಇದೇ ೨೧ರವರೆಗೆ ಭಾರೀ ಮಳೆಯಾಗುವ ಸಾಧ್ಯತೆಯಿದೆ. ಕೇರಳದಲ್ಲಿ ಇದೇ ೨೦ ಮತ್ತು ೨೧ ರಂದು ಧಾರಾಕಾರ ಮಳೆಯಾಗಲಿದೆ ಎಂದು ಇಲಾಖೆ ತಿಳಿಸಿದೆ. ಅರುಣಾಚಲಾ ಪ್ರದೇಶ, ಸಿಕ್ಕಿಂ,

ಅಸ್ಸಾಂ, ನಾಗಾಲ್ಯಾಂಡ್, ಮಣಿಪುರ ಮತ್ತು ಮೇಘಾಲಯದ ಕೆಲವು ಭಾಗಗಳಲ್ಲಿ ಇದೇ ೨೦ ರವರೆಗೆ ಗುಡುಗು ಸಹಿತ ಮಳೆಯಾಗಲಿದೆ. ದೇಶದ ಉತ್ತರ ಮತ್ತು ಪೂರ್ವ ಭಾಗಗಳಲ್ಲಿ ಮುಂದಿನ ಮೂರರಿಂದ ನಾಲ್ಕು ದಿನಗಳವರೆಗೆ ತಾಪಮಾನ ೨ ರಿಂದ ೪ ಡಿಗ್ರಿ ಸೆಲ್ಸಿಯಸ್ ಏರಿಕೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

<><*<><>*><>

ನೈರುತ್ಯ ಮುಂಗಾರು ಕೇರಳದ ಕರಾವಳಿಯನ್ನು ಪ್ರವೇಶಿಸಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಕೇರಳದಲ್ಲಿ ಇದೇ ೩೧ ರಂದು ಮುಂಗಾರು ಪ್ರವೇಶಿಸಲಿದ್ದು, ನಿಗದಿತ ಅವಧಿಗಿಂತ ನಾಲ್ಕು ದಿನಗಳ ಮೊದಲು ಕರಾವಳಿಯಲ್ಲಿ ಮಳೆ ಆರಂಭವಾಗಲಿದೆ. ಈ ಬಾರಿ ಮುಂಗಾರು ನಿಗದಿತ ವೇಳೆಗಿಂತ ಮೊದಲೇ ಪ್ರವೇಶ ಮಾಡಲಿದ್ದು, ಅಧಿಕ ಮಳೆಯಾಗಲಿದೆ ಎಂದು ಇಲಾಖೆ ಮಾಹಿತಿ ನೀಡಿದೆ.

<><*<><>*><>

ದೆಹಲಿ ವಾಯು ಮಾಲಿನ್ಯ ತಗ್ಗಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಕಳೆದ ೧೦ ವರ್ಷಗಳಿಂದ ಕೈಗೊಂಡಿರುವ ಕ್ರಮಗಳು ಯಾವುದೇ ಫಲ ನೀಡಲಿಲ್ಲ ಎಂದು ಕಾಂಗ್ರೆಸ್ ದೂರಿದೆ. ದೆಹಲಿಯಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಜೈರಾಮ್ ರಮೇಶ್, ದೆಹಲಿ ಚುನಾವಣೆಯಲ್ಲಿ ಪರಿಸರವು ಪ್ರಮುಖ ವಿಷಯವಾಗಿದೆ. ಅತಿಹೆಚ್ಚು ವಾಯುಮಾಲಿನ್ಯ ಹೊಂದಿರುವ ನಗರಗಳ ಪಟ್ಟಿಯಲ್ಲಿ ದೆಹಲಿ ಕೂಡ ಇದೆ. ದೆಹಲಿಯ ವಾಯು ಮಾಲಿನ್ಯಕ್ಕೆ ಪರಿಹಾರ ಕಂಡುಕೊಳ್ಳುವುದು ಕೇಂದ್ರ ಸರ್ಕಾರದ ಪ್ರಾಥಮಿಕ ಕರ್ತವ್ಯವಾಗಿದೆ ಎಂದರು. ಇದೇ ವೇಳೆ ರಾಸಾಯನಿಕ ಮಾಲಿನ್ಯ, ಅರಾವಳಿ ಪ್ರದೇಶದಲ್ಲಿ ಅರಣ್ಯನಾಶ, ದೆಹಲಿಯ ಸುತ್ತಮುತ್ತಲಿನ ಇಟ್ಟಿಗೆ ಗೂಡುಗಳು, ಉಷ್ಣ ವಿದ್ಯುತ್ ಸ್ಥಾವರಗಳು ಮತ್ತು ಯಮುನಾ ನದಿಯ ಮಾಲಿನ್ಯದ ಸಮಸ್ಯೆಗಳ ಕುರಿತು ಜೈರಾಮ್ ರಮೇಶ್ ಪ್ರಸ್ತಾಪಿಸಿದರು.

<><*<><>*><>

ಮುಂಬರುವ ದಿನಗಳಲ್ಲಿ ಜಗತ್ತಿನಲ್ಲಿ ಭಾರತವು ಪ್ರಮುಖ ಶಕ್ತಿಯಾಗಿ ಹೊರಹೊಮ್ಮಲು ಅಗತ್ಯವಿರುವ ಎಲ್ಲಾ ಶಕ್ತಿಯನ್ನು ದೇಶ ಅಭಿವೃದ್ಧಿಪಡಿಸಿಕೊಳ್ಳಲಿದೆ ಎಂದು ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಹೇಳಿದ್ದಾರೆ. ನವದೆಹಲಿಯಲ್ಲಿಂದು ವ್ಯಾಪಾರಿಗಳ ಒಕ್ಕೂಟ ಆಯೋಜಿಸಿದ್ದ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಅವರು, ವ್ಯಾಪಾರ ಸ್ನೇಹಿ ವಾತಾವರಣದ ಜೊತೆಗೆ

ಸಾಮರ್ಥ್ಯ ಮತ್ತು ಸ್ಪರ್ಧಾತ್ಮಕತೆಯನ್ನು ಹೆಚ್ಚಿಸುವುದು ಭಾರತದ ಪ್ರಯತ್ನವಾಗಿರಬೇಕು ಎಂದರು. ಭಾರತವು ದೃಢವಾದ ಬೆಳವಣಿಗೆ, ವ್ಯಾಪಕವಾದ ಸುಧಾರಣೆಗಳು, ಆಮೂಲಾಗ್ರ ಸುಧಾರಿತ ಆಡಳಿತ, ಹಣಕಾಸಿನ ಶಿಸ್ತು, ಮೂಲಸೌಕರ್ಯ ಪ್ರಗತಿ, ತ್ವರಿತ ಡಿಜಿಟಲೀಕರಣ ಮತ್ತು ಕೌಶಲ್ಯಗಳನ್ನು ಅಭಿವೃದ್ಧಿಪಡಿಸುವತ್ತ ಗಮನಹರಿಸಿದೆ ಎಂದು ಎಸ್.ಜೈಶಂಕರ್ ಹೇಳಿದರು. ಭಾರತ ಮೊದಲು ಮತ್ತು ವಸುಧೈವ ಕುಟುಂಬಕಂ ಪರಿಕಲ್ಪನೆಗಳು ಭಾರತವನ್ನು ವಿಶ್ವಬಂಧು ಸ್ಥಾನದಲ್ಲಿ ನಿಲ್ಲಿಸುತ್ತದೆ. ಜಗತ್ತಿನಲ್ಲಿ ಹೆಚ್ಚುತ್ತಿರುವ ಸಂಘರ್ಷ ಮತ್ತು ಉದ್ವಿಗ್ನ ವಾತಾವರಣವನ್ನು ಶಮನಗೊಳಿಸಿ, ಸ್ಥಿರತೆಯನ್ನು ತಂದು ಕೊಡುವ ಶಕ್ತಿ ಭಾರತಕ್ಕಿದೆ ಎಂದು ವಿದೇಶಾಂಗ ಸಚಿವ ಪ್ರತಿಪಾದಿಸಿದರು.

**<><*<><>*><>**

ಥಾಯ್ಲೆಂಡ್ ಓಪನ್ ಬ್ಯಾಡ್ಮಿಂಟನ್ ಚಾಂಪಿಯನ್‌ಶಿಪ್‌ನಲ್ಲಿ ಭಾರತದ ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಜೋಡಿ ಸೆಮಿಫೈನಲ್ಸ್ ಪ್ರವೇಶಿಸಿದೆ. ಬ್ಯಾಂಕಾಕ್‌ನಲ್ಲಿ ಇಂದು ನಡೆದ ಪುರುಷರ ಡಬಲ್ಸ್ ವಿಭಾಗದ ಕ್ವಾರ್ಟರ್ ಫೈನಲ್ಸ್ ಪಂದ್ಯದಲ್ಲಿ ಮಲೇಷಿಯಾದ ಜುನೈದಿ ಆರಿಫ್ ಮತ್ತು ರಾಯ್ ಕಿಂಗ್ ಯಾಪ್ ಜೋಡಿಯನ್ನು ೨೧-೭, ೨೧-೧೪ ನೇರ ಸೆಟ್‌ಗಳಿಂದ ಮಣಿಸಿದ ಭಾರತದ ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಜೋಡಿ ಸೆಮಿಫೈನಲ್ಸ್ ಪ್ರವೇಶಿಸಿತು. ನಾಳೆ ನಡೆಯಲಿರುವ ಮಹಿಳೆಯರ ಡಬಲ್ಸ್ ವಿಭಾಗದ ಸೆಮಿಫೈನಲ್ಸ್ ಪಂದ್ಯದಲ್ಲಿ ಭಾರತದ ಅಶ್ವಿನಿ ಪೊನ್ನಪ್ಪ ಮತ್ತು ತನಿಶಾ ಕ್ರಾಸ್ಟೊ ಜೋಡಿಯು ಥಾಯ್ಲೆಂಡ್ ಜೋಡಿ ವಿರುದ್ಧ ಸೆಣಸಲಿದೆ.

**<><*<><>*><>**

ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿಂದು ನಡೆಯುತ್ತಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ಹಾಗೂ ಲಖನೌ ಸೂಪರ್ ಜೈಂಟ್ಸ್ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದ ಮುಂಬೈ ಇಂಡಿಯನ್ಸ್ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಿಗ್ಗೆ ೭.೦೫ ಕ್ಕೆ <>*><>**